(51)

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ. ಕೆ ಪ್ರತಾಪ್ ಸಿಂಹ ನಾಯಕ್ ರವರ 72ನೇ ನಿಯಮದ ಮೇರೆಗೆ ಗಮನ ಸೆಳೆಯುವ ಸೂಚನೆ ಸಂಖ್ಯೆ(51) ಕ್ಕೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ:-** ರಾಜ್ಯ ಸರ್ಕಾರವು 1996 ರಲ್ಲಿ ಅರ್ಹ ಅರಣ್ಯ ಒತ್ತುವರಿ ಪ್ರಕರಣಗಳನ್ನು ಸಕ್ರಮಗೊಳಿಸಲು ಕೇಂದ್ರ ಸರ್ಕಾರಕ್ಕೆ ಅನುಮತಿ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಅರ್ಹ ಒತ್ತುವರಿದಾರರ ಹಲವಾರು ಪ್ರಕರಣಗಳು ಕೈಬಿಟ್ಟು ಹೋಗಿವೆ. ಅಲ್ಲದೇ, ಈ ಹಿಂದೆ ಅರಣ್ಯ ಕಾಯ್ದೆಗಳನ್ವಯ ಮಂಜೂರಾದ ಎಲ್ಲಾ ಅರಣ್ಯ ಭೂಮಿಯನ್ನು "Denotification" ಮಾಡದೆ ಇಂದಿಗೂ ಇಂತಹ ಮಂಜೂರಾತಿಗಳು ಕರ್ನಾಟಕ ಅರಣ್ಯ ಇಲಾಖೆಯ ದಾಖಲೆಗಳಲ್ಲಿ "ಅರಣ್ಯ" ಎಂಬುದಾಗಿ ಮುಂದುವರೆಸಿಕೊಂಡು ಬರಲಾಗುತ್ತಿರುವುದರಿಂದ, ಹಲವಾರು ಅರ್ಹ ಅರಣ್ಯ ಒತ್ತುವರಿದಾರರಿಗೆ ಇಂದಿಗೂ ನ್ಯಾಯ ಸಿಗದೇ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಅರಣ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

*******

**ಉತ್ತರ:**

ದಿನಾಂಕ: 27.04.1978ರ ಪೂರ್ವದಲ್ಲಿ ಆಗಿರುವ ಅರಣ್ಯ ಒತ್ತುವರಿ ಪ್ರಕರಣಗಳ ಕುರಿತು ರಾಜ್ಯ ಸರ್ಕಾರವು ಪತ್ರ ಸಂ: FEE 5 FGL 90/1 ದಿನಾಂಕ: 16-07-1995ರಂದು ಒಟ್ಟು 17,007.23 ಹೆ. ಪ್ರದೇಶವನ್ನು ಸಕ್ರಮಗೊಳಿಸುವ ಕುರಿತು ಕೇಂದ್ರ ಸರ್ಕಾರ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ, ಸದರಿ ಪ್ರಸ್ತಾವನೆ ಕುರಿತು ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಸಚಿವಾಲಯ, ನವದೆಹಲಿ ರವರ ಪತ್ರ ಸಂ.: ನಂ.8-50/95-FC, ದಿನಾಂಕ: 15.05.1996ರಲ್ಲಿ 19,348 ಒತ್ತುವರಿ ಪ್ರಕರಣಗಳಲ್ಲಿ 14,848.83ಹೆ. ಅರಣ್ಯ ಭೂಮಿಯನ್ನು ಅರಣ್ಯ ಸಂರಕ್ಷಣಾ ಕಾಯ್ದೆ 1980ರ ಕಲಂ-2 ರನ್ವಯ ಸಕ್ರಮಗೊಳಿಸಲು ಕೆಲವು ಷರತ್ತುಗಳಿಗೆ ಒಳಪಟ್ಟು ಆದೇಶಿಸಲಾಗಿರುತ್ತದೆ. (ಅನುಬಂಧ-1)

ಮುಂದುವರೆದು, ಕೇಂದ್ರ ಸರ್ಕಾರದ ಅನುಮೋದನೆ ಮೇರೆಗೆ ರಾಜ್ಯ ಸರ್ಕಾರವು ಎಫ್ಇಇ 5 ಎಫ್ಜಿಎಲ್ 90, ಬೆಂಗಳೂರು, ದಿನಾಂಕ:05.05.1997 ರನ್ವಯ ಅರಣ್ಯ ಒತ್ತುವರಿ ಪ್ರಕರಣಗಳನ್ನು ಕೆಲವು ಷರತ್ತುಗಳನ್ನು ವಿಧಿಸಿ ಸಕ್ರಮಗೊಳಿಸಲು ಅನುಮತಿ ನೀಡಿರುತ್ತದೆ. ಈ ಷರತ್ತುಗಳನ್ವಯ ಜಿಲ್ಲಾಧಿಕಾರಿಗಳು ಅರ್ಹ ಅರಣ್ಯ ಒತ್ತುವರಿದಾರರು ಹಾಗೂ ಒತ್ತುವರಿದಾರರಿಗೆ ಅನ್ವಯಿಸುವ ವಿಸ್ತೀರ್ಣವನ್ನು ಗುರುತಿಸಬೇಕಾಗಿತ್ತು. ಆದರೆ ಗುರುತಿಸುವಿಕೆಯ ಕಾರ್ಯವು ಸಂಪೂರ್ಣಗೊಂಡಿರುವುದಿಲ್ಲ. (ಅನುಬಂಧ-2)

ಕೇಂದ್ರ ಸರ್ಕಾರದ ಪತ್ರದಲ್ಲಿ ತಿಳಿಸಿದ ಷರತ್ತುಗಳಲ್ಲಿ, ಪ್ರಮುಖವಾದ ಷರತ್ತು, ಅರ್ಹ ಅರಣ್ಯ ಒತ್ತುವರಿಗಳಿಗೆ ಸಂಬಂಧಿಸಿದಂತೆ ಸಕ್ರಮಗೊಳಿಸುವ ಅರಣ್ಯ ಪ್ರದೇಶಗಳ ಪರ್ಯಾಯವಾಗಿ ಸಮನಾಂತರ ಪರಿಹಾರಾತ್ಮಕ ನೆಡುತೋಪುಗಳಾಗಿ ಅರಣ್ಯೇತ್ತರ ಪ್ರದೇಶಗಳನ್ನು ಗುರುತಿಸಿ, ಕರ್ನಾಟಕ ಅರಣ್ಯ ಕಾಯ್ದೆ-1963ರಡಿ ಮೀಸಲು/ರಕ್ಷಿತ ಅರಣ್ಯ ಎಂದು ಅಧಿಸೂಚಿಸುವುದು

ಅಗತ್ಯವಿರುತ್ತದೆ. ಇದರೊಂದಿಗೆ, ಪರಿಹಾರಾತ್ಮಕ ನೆಡುತೋಪು ಪ್ರದೇಶಗಳಲ್ಲಿ ನೆಡುತೋಪುಗಳನ್ನು ಬೆಳೆಸಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಇದಲ್ಲದೇ, ಈ ಮೇಲೆ ನಮೂದಿಸಿರುವ ಕೇಂದ್ರ ಸರ್ಕಾರದ ಆದೇಶದಲ್ಲಿ ಕೆಲವೊಂದು ಷರತ್ತುಗಳನ್ನು ಕ್ಷೇತ್ರಮಟ್ಟದಲ್ಲಿ ಅನುಷ್ಠಾನಗೊಳಿಸಲು ಕಷ್ಟಸಾಧ್ಯವಾಗಿರುತ್ತದೆ. ಉದಾಹರಣೆಗೆ,

"Regularisation of encroachments will not be done in favour of encroachers in the midst of Forest area, steep slopes or in the wildlife sanctuaries, national parks etc., Such encroachers are to be relocated on the fringe of the forest for which excess area available with eligible encroachers may be utilised"

ಮುಂದುವರೆದು, ಅರಣ್ಯ ಒತ್ತುವರಿ ಪ್ರದೇಶಗಳನ್ನು ಸಕ್ರಮಗೊಳಿಸಲು ಕರ್ನಾಟಕ ಅರಣ್ಯ ಕಾಯ್ದೆ-1963ರ ಕಲಂ-28ರಲ್ಲಿ ಡಿ-ನೋಟಿಫೈ / ಡಿ-ರಿಸರ್ವ್ ಮಾಡಬೇಕಾಗಿರುತ್ತದೆ. ಆದರೆ ಈ ಮಧ್ಯೆ, ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 13.11.2000ರಲ್ಲಿ, IA No. 2 in WP No. 337/1995 and again re iterated by the Supreme Court on 09.02.2004 in IA No. 16 that "...Pending further orders, no de-reservation of Forest/Sanctuaries/National Parks shall be effected" ಎಂದು ಆದೇಶಿಸಿರುತ್ತದೆ. (ಅನುಬಂಧ-3)

ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರವು ವಿಧಿಸಿರುವ ಷರತ್ತುಗಳನ್ವಯ ಜಿಲ್ಲಾಧಿಕಾರಿಗಳು ಗುರುತಿಸಿರುವ ಪ್ರಕರಣಗಳ ಸಮಗ್ರ ಪ್ರಸ್ತಾವನೆಯನ್ನು ಮಧ್ಯಂತರ ಅರ್ಜಿ (I.A) ಮುಖಾಂತರ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿ, ಸಂಬಂಧಿಸಿದ ಅರಣ್ಯ ಪ್ರದೇಶವನ್ನು ಡಿ-ರಿಸರ್ವ್/ಡಿ-ನೋಟಿಫೈ ಮಾಡಲು ಅನುಮತಿಯನ್ನು ಕೋರಲಾಗುವುದು. ಮುಂದುವರೆದು, ಈ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಅದಲ್ಲದೇ, ಮೇಲೆ ನಮೂದಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆ ನಡೆಸಿ, ಕಾನೂನು ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ: FEE/ 35/ FGL/ 2025**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು